ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 20 (10) |
| ಸದಸ್ಯರ ಹೆಸರು | ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 04/07/2023 |
| ಉತ್ತರಿಸುವವರು | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ. |
|---|---|---|
| ಅ) | ರಾಜ್ಯದಲ್ಲಿರುವ ವಿವಿಧ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಮಂಜೂರಾದ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿನ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ 36779, ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ನೌಕರರ ಸಂಖ್ಯೆ: 19839 ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ:16940. |
| ಆ) | ರಾಜ್ಯದಲ್ಲಿರುವ ವಿವಿಧ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳ ವಿವಿಧ ಸ್ತರದಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಮತ್ತು ಹೊರಗುತ್ತಿಗೆ ನೌಕರರ ಸಂಖ್ಯೆ ಎಷ್ಟು; ಸದರಿ ನೌಕರರಿಗೆ ಪ್ರಸಕ್ತ ನೀಡುತ್ತಿರುವ ವೇತನ ಎಷ್ಟು; | ರಾಜ್ಯದಲ್ಲಿನ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ವಿವಿಧ ಹುದ್ದೆಗಳಲ್ಲಿ ಒಟ್ಟು 538 ಗುತ್ತಿಗೆ ನೌಕರರು ಹಾಗೂ ಒಟ್ಟು 8225 ಹೊರಗುತ್ತಿಗೆ ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ.<br><br>ನೇರಪಾವತಿ/ ಗುತ್ತಿಗೆ/ ಹೊರಗುತ್ತಿಗೆ/ ಪೌರ ಕಾರ್ಮಿಕರಿಗೆ ಹಾಗೂ ಇತರೆ ಹೊರಗುತ್ತಿಗೆ ನೌಕರರಿಗೆ ಕಾರ್ಮಿಕ ಇಲಾಖೆಯ ಕನಿಷ್ಠ ವೇತನದ ಪ್ರಕಾರ ಮಾಸಿಕವಾಗಿ ವೇತನ ಪಾವತಿಸಲಾಗುತ್ತದೆ.<br><br>ನಗರ ಸ್ಥಳೀಯ ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ಹಿಸುತ್ತಿರುವ ಜ್ಯೂನಿಯರ್ ಹಾಗೂ ಸೀನಿಯರ್ ಪ್ರೋಗ್ರಾಮರ್‌ಗಳಿಗೆ ನಿರ್ದೇಶನಾಲಯದ ಅಧಿಕೃತ ಜ್ಞಾಪನ ಸಂಖ್ಯೆ ಪೌನಿ/ಎಂಆರ್ಸಿ/ಸಿಆರ್-92/2003-04 ದಿನಾಂಕ. 07.06.2010 ಹಾಗೂ ಸರ್ಕಾರದ ಪತ್ರ ಸಂಖ್ಯೆ ನಅಇ 64 ಇಎಂಸಿ 2022(ಪಿ-1) ದಿನಾಂಕ:28.03.2023 ರನ್ವಯ ಸಂಭಾವನೆ ಪಾವತಿಸಲಾಗುತ್ತಿದೆ.<br><br>ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ಹಿಸುತ್ತಿರುವ ಅಕೌಟೆಂಟ್ ಕನ್ಸಲ್ಟೆಂಟ್‌ಗಳಿಗೆ ನಿರ್ದೇಶನಾಲಯದ ಆದೇಶ ಸಂ: ಪೌನಿ/ಎಂ.ಆರ್.ಸಿ./ಇಎಂಸಿ/ಸಿಆರ್-96/2009-10, ದಿನಾಂಕ: 3.03.2010 ಹಾಗೂ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ 18733/ಡಿಎಂಎ/6/ಎಫ್ಪಿಎಎಸ್/16-17 ದಿನಾಂಕ. 17.03.2017ರನ್ವಯ ಸಂಭಾವನೆ ಪಾವತಿಸಲಾಗುತ್ತಿದೆ. |

| | | |
|---|---|---|
| ಇ) | ರಾಜ್ಯದಲ್ಲಿರುವ ವಿವಿಧ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು; ಅವರುಗಳಿಗೆ ನೀಡುತ್ತಿರುವ ವೇತನ ಮತ್ತು ಇತರ ಸೌಲಭ್ಯಗಳೇನು; | ರಾಜ್ಯದ ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿಗಳಲ್ಲಿ ಖಾಯಂ-7545, ನೇರಪಾವತಿ-3720 ಮತ್ತು ಹೊರಗುತ್ತಿಗೆ/ಗುತ್ತಿಗೆ/ದಿನಗೂಲಿ/ ಕ್ಷೇಮಾಭಿವೃದ್ಧಿ / ಇತರೆ-804 ಸೇರಿ ಒಟ್ಟು-12069 ಪೌರಕಾರ್ಮಿಕರುಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಸರ್ಕಾರದ ಆದೇಶ ಸಂಖ್ಯೆ:ನಅಇ 126 ಟಿಎಂಎಸ್ 2016, ದಿನಾಂಕ:7.8.2017 ರಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ 700 ಜನಸಂಖ್ಯೆಗೆ ಒಬ್ಬ ಪೌರಕಾರ್ಮಿಕರಂತೆ ನಿಗದಿಪಡಿಸಲಾಗಿದ್ದು, ಹೊರಗುತ್ತಿಗೆ ನೀಡುವುದನ್ನು ಸ್ಥಗಿತಗೊಳಿಸಿ, ಸ್ಥಳೀಯ ಸಂಸ್ಥೆಗಳಿಂದ ನೇರವಾಗಿ ಸಂಭಾವನೆಯನ್ನು ನೀಡಲು ಆದೇಶಿಸಲಾಗಿರುತ್ತದೆ.<br><br>ಖಾಯಂ ಪೌರಸೇವಾ ನೌಕರರಿಗೆ ಸರ್ಕಾರದ ಆದೇಶಾನುಸಾರ ಕಾಲಕಾಲಕ್ಕನುಗುಣವಾಗಿ ಹಾಗೂ ವೇತನ ಆಯೋಗದ ಆದೇಶದಂತೆ ಬದಲಾಗುವ ವೇತನದಂತೆಯೇ ಖಾಯಂ ಪೌರಕಾರ್ಮಿಕರಿಗೂ ಸಹ ವೇತನ ಪಾವತಿಸಲಾಗುತ್ತಿದೆ ಹಾಗೂ ನೇರ ಪಾವತಿ (ಹೊರಗುತ್ತಿಗೆ) ಹಾಗೂ ಗುತ್ತಿಗೆ ಪೌರಕಾರ್ಮಿಕರುಗಳಿಗೆ ಕಾರ್ಮಿಕ ಇಲಾಖೆಯು ನಿಗದಿಪಡಿಸಿರುವ ಕನಿಷ್ಠ ವೇತನ ಪ್ರಕಾರ ಗ್ರೇಡ್-1 ನಗರಸಭೆಯಲ್ಲಿ ರೂ.18419/-, ಗ್ರೇಡ್-2 ನಗರಸಭೆಯಲ್ಲಿ ರೂ.17990/-, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಯಲ್ಲಿ ರೂ.17561/- ವೇತನ ನೀಡಲಾಗುತ್ತಿದ್ದು, ಇಎಸ್‌ಐ & ಪಿಎಫ್ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ.<br><br>**ಪೌರಕಾರ್ಮಿಕರಿಗೆ ನೀಡುತ್ತಿರುವ ಇತರೆ ಸೌಲಭ್ಯಗಳು:**<br><br>1. ಕಾರ್ಮಿಕ ಇಲಾಖೆಯು ನಿಗಧಿಪಡಿಸುವ ಪರಿಷ್ಕೃತ ವೇತನ ಜೊತೆಗೆ ಪಿಎಫ್ & ಇಎಸ್‌ಐ ಸೌಲಭ್ಯ ಕಲ್ಪಿಸಲಾಗಿರುತ್ತದೆ.<br>2. ಪೌರಕಾರ್ಮಿಕರ ಸುರಕ್ಷತೆಗಾಗಿ ಸುರಕ್ಷಾ ಧಿರಿಸುಗಳಾದ ಗಮ್‌ಬೂಟ್ಸ್, ಕೈ ಕವಚ, ಸಮವಸ್ತ್ರ, ರೈನ್ ಕೋಟ್, ಕ್ಯಾಪ್, ಫೇಸ್‌ಮಾಸ್ಕ್ ಹಾಗೂ ಇತರೆ ಧಿರಿಸುಗಳನ್ನು ನೀಡಲು ಸೂಚನೆಗಳನ್ನು ನೀಡಲಾಗಿದೆ, ಎಲ್ಲಾ ವರ್ಗದ ಪೌರಕಾರ್ಮಿಕರಿಗೆ ದಿನ ನಿತ್ಯ ಬೆಳಗಿನ ಉಪಹಾರ ನೀಢಲು ಸಹ ಸೂಚನೆ ನೀಡಲಾಗಿದೆ.<br>3. ಹೊರಗುತ್ತಿಗೆ ಪೌರಕಾರ್ಮಿಕರ ಆರೋಗ್ಯ ಸುರಕ್ಷತೆ ಮೂರು ತಿಂಗಳಿಗೊಮ್ಮೆ ನಿಯತಕಾಲಿಕವಾಗಿ ಅಸಿಸ್ಟಂಟ್ ಸರ್ಜನ್ ದರ್ಜೆಗಿಂತ ಕಡಿಮೆಯಿರದ ವೈದ್ಯಾಧಿಕಾರಿಗಳಿಂದ ವೈದ್ಯಕೀಯ ತಪಾಸಣೆಯನ್ನು ಮಾಡಿಸಲು ಸೂಚಿಸಲಾಗಿರುತ್ತದೆ.<br>4. ಪೌರಕಾರ್ಮಿಕರ ಕುಟುಂಬ ಕಲ್ಯಾಣಕ್ಕಾಗಿ ವಿದ್ಯಾಭ್ಯಾಸ, ವಸತಿ ಹಾಗೂ ಉದ್ಯೋಗ ಅರ್ಹತೆಗಳಿಗಾಗಿ ಎಸ್‌ಸಿಪಿ/ಟಿಎಸ್‌ಪಿ ಅನುದಾನವನ್ನು |

| | | |
|---|---|---|
| | | ಮೀಸಲಿರಿಸಿ, ಬಳಸಲು ಸೂಚನೆ ನೀಡಲಾಗಿದೆ.<br>5. ಪ್ರತಿ ವರ್ಷ 23ನೇ ಸೆಪ್ಟೆಂಬರ್ ಅಥವಾ 22ನೇ ಫೆಬ್ರವರಿ ದಿನದಂದು ಪೌರ ಕಾರ್ಮಿಕರ ದಿನಾಚರಣೆ ಆಚರಿಸಲು ಸೂಚನೆ ನೀಡಲಾಗಿದೆ.<br>6. ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆ ಕಾರ್ಯಕ್ರಮ.<br>7. ಹೆಪಟೈಟೀಸ್-ಬಿ ಲಸಿಕೆ ನೀಡುವ ಕಾರ್ಯಕ್ರಮ.<br>8. ವಿಮಾ ಸೇವೇಗಳಾದ-ಪ್ರಧಾನಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ, ಭಾರತೀಯ ಸ್ಟೇಟ್ ಬ್ಯಾಂಕ್ ಆಪ್ ಪರಸನಲ್ ಆಕ್ಸಿಡೆಂಟ್ ಇನ್ಸುರೆನ್ಸ್ ಹಾಗೂ ಎಸ್‌ಬಿಐ ಜನರಲ್ ಇನ್ಸುರೆನ್ಸ್, ಗ್ರೂಪ್ ಮೆಡಿಕ್ಲೈಮ್ ಪಾಲಿಸಿ ಸೌಲಭ್ಯ ಲಭ್ಯಪಡಿಸಲಾಗಿದೆ.<br>9. ಬೆಳಗಿನ ಉಪಹಾರ ಪೂರೈಕೆ.<br>10. ಪೌರಕಾರ್ಮಿಕರ ಮಕ್ಕಳ ಉನ್ನತ ಶಿಕ್ಷಣಕ್ಕೆ ಪ್ರಥಮ ಆದ್ಯತೆ ನೀಡಿ ಶೇ.24.10 ಹಾಗೂ ಶೇ.7.25 ಕಲ್ಯಾಣ ಕಾರ್ಯಕ್ರಮದಡಿ ವಿಶೇಷ ಆರ್ಥಿಕ ನೆರವು ನೀಡಲಾಗುತ್ತಿದೆ.<br>11. ಖಾಯಂ ವಸತಿ ರಹಿತ ಪೌರಕಾರ್ಮಿಕರಿಗೆ ಗೃಹಭಾಗ್ಯ ಯೋಜನೆಯಡಿ ವಸತಿ ಸೌಲಭ್ಯವನ್ನು ನೀಡಲಾಗುತ್ತದೆ. |
| ಈ | ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಪ್ರತಿಯೊಬ್ಬ ಪೌರ ಕಾರ್ಮಿಕರು ಮತ್ತು ಗುತ್ತಿಗೆ ನೌಕರರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ಪಾವತಿಸಲಾಗುತ್ತಿದೆಯೇ; ಇಲ್ಲವಾದಲ್ಲಿ ಕಾರಣಗಳೇನು; | ನೇರಪಾವತಿ/ ಗುತ್ತಿಗೆ/ ಹೊರಗುತ್ತಿಗೆ/ ಪೌರ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯ ಕನಿಷ್ಠ ವೇತನದ ಪ್ರಕಾರ ಮಾಸಿಕವಾಗಿ ವೇತನ ಪಾವತಿಸಲಾಗುತ್ತಿದೆ.<br><br>ನಗರ ಸ್ಥಳೀಯ ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ಹಿಸುತ್ತಿರುವ ಜ್ಯೂನಿಯರ್ ಹಾಗೂ ಸೀನಿಯರ್ ಪ್ರೋಗ್ರಾಮರ್‌ಗಳಿಗೆ ನಿರ್ದೇಶನಾಲಯದ ಅಧಿಕೃತ ಜ್ಞಾಪನ ಸಂಖ್ಯೆ ಪೌನಿ/ಎಂಆರ್ಸಿ/ಸಿಆರ್-92/2003-04 ದಿನಾಂಕ. 07.06.2010 ಹಾಗೂ ಸರ್ಕಾರದ ಪತ್ರ ಸಂಖ್ಯೆ ನಅಇ 64 ಇಎಂಸಿ 2022 (ಪಿ-1) ದಿನಾಂಕ. 28.03.2023 ರನ್ವಯ ಸಂಭಾವನೆ ಪಾವತಿಸಲಾಗುತ್ತಿದೆ.<br><br>ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ಹಿಸುತ್ತಿರುವ ಅಕೌಟೆಂಟ್ ಕನ್ಸಲ್ಟೆಂಟ್‌ಗಳಿಗೆ ನಿರ್ದೇಶನಾಲಯದ ಆದೇಶ ಸಂ: ಪೌನಿ / ಎಂ.ಆರ್.ಸಿ. / ಇಎಂಸಿ / ಸಿಆರ್-96 / 2009-10, ದಿನಾಂಕ: 3.03.2010 ಹಾಗೂ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ 18733 / ಡಿಎಂಎ / 6 / ಎಫ್ಬಿಎಸ್ / 16-17 ದಿನಾಂಕ. 17.03.2017ರನ್ವಯ ಸಂಭಾವನೆ ಪಾವತಿಸಲಾಗುತ್ತಿದೆ. |

| | | |
|---|---|---|
| ಉ | ಪೌರ ಕಾರ್ಮಿಕರು ಸೇರಿದಂತೆ ಗುತ್ತಿಗೆ ನೌಕರರನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಒಟ್ಟು ಎಷ್ಟು ನೌಕರರನ್ನು ಖಾಯಂಮಾತಿ ಮಾಡಲಾಗಿದೆ; ಉಳಿದ ನೌಕರರನ್ನು ಖಾಯಂಮಾತಿ ಮಾಡುವ ಕುರಿತು ಸರ್ಕಾರ ಯಾವ ಹಂತದಲ್ಲಿ, ಯಾವ ಯಾವ ಕ್ರಮ ಕೈಗೊಳ್ಳಲಿದೆ? | ಸರ್ಕಾರದ ಆದೇಶ ಸಂಖ್ಯೆ: ನಅಇ 126 ಟಿಎಂಎಸ್ 2016, ದಿ.04.12.2017 ರೀತ್ಯಾ ಪೌರಕಾರ್ಮಿಕರನ್ನು ಒಂದು ಬಾರಿಗೆ ವಿಶೇಷ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುವಂತೆ 30 ಜಿಲ್ಲೆಗಳಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. ಅಧಿಸೂಚನೆ ಹೊರಡಿಸಿದ 255 ನಗರ ಸ್ಥಳೀಯ ಸಂಸ್ಥೆಗಳಲ್ಲಿ 249 ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದೆ. 04 ನಗರ ಸ್ಥಳೀಯ ಸಂಸ್ಥೆಗಳಾದ ಕೆ.ಜಿ.ಎಫ್, ನೆಲಮಂಗಲ, ಚಿಕ್ಕೋಡಿ ಮತ್ತು ರಾಮದುರ್ಗದಲ್ಲಿ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. 2 ನಗರ ಸ್ಥಳೀಯ ಸಂಸ್ಥೆಗಳಲ್ಲಿ (ಚಳ್ಳಕೆರೆ ಮತ್ತು ಖಾನಾಪುರ) ನೇಮಕಾತಿ ಸಂಬಂಧ ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇರುತ್ತದೆ.<br><br>ಅದಲ್ಲದೇ ರಾಜ್ಯದ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಲ್ಲಿ ನೇರಪಾವತಿಯಡಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ವಿಶೇಷ ನೇಮಕಾತಿ ನಿಯಮಗಳು–2022 ರ ರೀತ್ಯಾ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 176 ಜಿಇಎಲ್ 2022. ದಿನಾಂಕ:23.11.2022 ರಲ್ಲಿ 5533 ಹುದ್ದೆಗಳಿಗೆ ವಿಶೇಷ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುವಂತೆ 30 ಜಿಲ್ಲೆಗಳಲ್ಲಿ (ಬೆಳಗಾವಿ ಹೊರತುಪಡಿಸಿ) ನೇಮಕಾತಿ ಅಧಿಸೂಚನೆ ಹೊರಡಿಸಲಾಗಿದೆ. 16 ಜಿಲ್ಲೆಗಳಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದೆ. ಉಳಿದಂತೆ 14 ಜಿಲ್ಲೆಗಳಲ್ಲಿ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>ವಿಶೇಷ ನೇಮಕಾತಿ ನಿಯಮ–2017 ಮತ್ತು ವಿಶೇಷ ನೇಮಕಾತಿ ನಿಯಮ–2022 ಸೇರಿ ಇಲ್ಲಿಯವರೆಗೆ 2558+1654=4212 ಪೌರಕಾರ್ಮಿಕರನ್ನು ವಿಶೇಷ ನೇಮಕಾತಿ ಮೂಲಕ ಖಾಯಂ ಮಾಡಿಕೊಳ್ಳಲಾಗಿದೆ.<br><br>ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಗುತ್ತಿಗೆ ನೌಕರರನ್ನು ಖಾಯಂ ಮಾಡುವ ಯಾವುದೇ ಪ್ರಸ್ತಾವನೆಯು ಸರ್ಕಾರದಲ್ಲಿ ಇರುವುದಿಲ್ಲ. |

ಸಂಖ್ಯೆ: ನಅಇ 89 ಜಿಇಎಲ್ 2023

(ರಹೀಂಖಾನ್)
ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು.